ಬೀದರ್ ಜಿಲ್ಲೆಯಲ್ಲಿ ಕರ್ನಾಟಕ ರಾಜ್ಯ ನಗರ ನೀರು ಸರಬರಾಜು ಮಂಡಳಿಯ ಯೋಜನೆಗಳನ್ನು ಕಾರ್ಯಗತ

273 - ಶ್ರೀ ನಾರಾಯಣರಾವ್ ಮನಹಳ್ಳಿ (ಬೀದರ್) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಕರ್ನಾಟಕ ರಾಜ್ಯ ನಗರ ನೀರು ಸರಬರಾಜು ಮಂಡಲಿಯ ವತಿಯಿಂದ ಎಷ್ಟು ಯೋಜನೆಗಳನ್ನು ಕಾರ್ಯಗತಗೊಳಿಸಲಾಗಿದೆ. (ತಾಲ್ಲೂಕುವಾರು ಅಂಕಿಅಂಶಗಳನ್ನು ಒದಗಿಸುವುದು).

ಆ) ಇದಕ್ಕಾಗಿ ಖರ್ಚು ಮಾಡಿದ ಮೊತ್ತವೆಷ್ಟು?

ಇ) ಜಿಲ್ಲೆಯಲ್ಲಿ ಹೊಸದಾಗಿ ಎಷ್ಟು ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಇವುಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ಸಿ.ಆರ್. ಸಗೀರ್ ಅಹಮದ್ (ನಗರಾಭಿವೃದ್ಧಿ ಸಚಿವರು) :

ಅ) ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಈ ಕೆಳಕಂಡ ಯೋಜನೆಗಳನ್ನು ಕಾರ್ಯಗತಗೊಳಿಸಲಾಗಿದೆ.

1) ಬಾಲ್ಕಿ ಪಟ್ಟಣಕ್ಕೆ ಸುಧಾರಿತ ನೀರು ಸರಬರಾಜು ಯೋಜನೆ
2) ಬೀದರ್ ಪಟ್ಟಣಕ್ಕೆ ಸುಧಾರಿತ ನೀರು ಸರಬರಾಜು ಯೋಜನೆ
3) ಬೀದರ್ ಪಟ್ಟಣಕ್ಕೆ ಒಳಚರಂಡಿ ಯೋಜನೆ.

ಆ)

1)	ಬಾಲ್ಕಿ ಪಟ್ಟಣದ ನೀರು ಸರಬರಾಜು ಯೋಜನೆ	ರೂ. 147.17 ಲಕ್ಷಗಳು
2)	ಬೀದರ್ ಪಟ್ಟಣದ ನೀರು ಸರಬರಾಜು ಯೋಜನೆ	ರೂ. 174.33 ಲಕ್ಷಗಳು
3)	ಬೀದರ್ ಪಟ್ಟಣ ಒಳಚರಂಡಿ ಯೋಜನೆ	ರೂ. 169.96 ಲಕ್ಷಗಳು
	ಒಟ್ಟು ಮೊತ್ತ	ರೂ. 491.46 ಲಕ್ಷಗಳು

ಇ) ಬೀದರ್ ಜಿಲ್ಲೆಯಲ್ಲಿ ಈ ಕೆಳಕಂಡ ಹೊಸ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ.

1) ಬಸವಕಲ್ಯಾಣ ಪಟ್ಟಣಕ್ಕೆ ಸುಧಾರಿತ ನೀರು ಸರಬರಾಜು ಯೋಜನೆ
2) ಹುಮಾನಾಬಾದ್ ಪಟ್ಟಣಕ್ಕೆ ಸುಧಾರಿತ ನೀರು ಸರಬರಾಜು ಯೋಜನೆ
3) ಚಿಟಗುಪ್ಪ ಪಟ್ಟಣಕ್ಕೆ ಕೊಳವೆ ನೀರು ಸರಬರಾಜು ಯೋಜನೆ

ಈ ಮೇಲಿನ ಮೂರು ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ : ವನಇ 10 ಯುಡಬ್ಲ್ಯೂಎಸ್94 ದಿ: 11-8-94ರಲ್ಲಿ..... ಮಂಜೂರಾತಿಯನ್ನು ನೀಡಿದೆ. ಅಂದಾಜು ವೆಚ್ಚದಲ್ಲಿ ಸ್ಥಳೀಯ ಸಂಸ್ಥೆಯು ತನ್ನ ವಂತಿಗೆಯಲ್ಲಿನ 1/3 ಭಾಗದ ಹಣವನ್ನು ಪಾವತಿ ಮಾಡಿದ ನಂತರ ಯೋಜನೆಯನ್ನು ಪ್ರಾರಂಭಿಸಲಾಗುವುದು.

ಚಿಕ್ಕಮಗಳೂರು ಜಿಲ್ಲೆಯಲ್ಲಿ ಅಕ್ರಮ ಸಾಗುವಳಿಯ ಸಕ್ರಮ

280 - ಶ್ರೀಮತಿ ಮೋಟಮ್ಮ (ಮೂಡಿಗೆರೆ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಇದುವರೆಗೂ ಅಕ್ರಮ ಸಾಗುವಳಿಯನ್ನು ಸಕ್ರಮಗೊಳಿಸುವಲ್ಲಿ ಯಾವ ತಾಲ್ಲೂಕಿನಲ್ಲಿ ಎಷ್ಟುಷ್ಟು ಸಕ್ರಮಗೊಳಿಸಲಾಗಿದೆ? ಎಷ್ಟು ತಿರಸ್ಕರಿಸಲಾಗಿದೆ?